ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	549
ಸದಸ್ಯರ ಹೆಸರು	:	ಶ್ರೀ.ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸುವ ದಿನಾಂಕ	:	05.02.2021
ಉತ್ತರಿಸುವ ಸಚಿವರು	:	ಮಾನ್ಯ ಪಶುಸಂಗೋಪನೆ ಸಚಿವರು

<table>
<tr><th>ಕ್ರ.ಸಂ</th><th>ಪ್ರಶ್ನೆಗಳು</th><th>ಉತ್ತರಗಳು</th></tr>
<tr><td>ಅ)</td><td>ಧಾರವಾಡ, ಗದಗ, ಹಾವೇರಿ ಜಿಲ್ಲೆಯಲ್ಲಿ ಬರುವ ಪಶುಚಿಕಿತ್ಸಾಲಯಗಳೆಷ್ಟು;</td><td>ಧಾರವಾಡ, ಗದಗ, ಹಾವೇರಿ ಜಿಲ್ಲೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ವಿವಿಧ ಪಶುವೈದ್ಯ ಸಂಸ್ಥೆಗಳ ಸಂಖ್ಯೆಯ ವಿವರವನ್ನು ಈ ಕೆಳಕಂಡಂತೆ ನೀಡಲಾಗಿದೆ.
<table><tr><th>ಕ್ರ.ಸಂ</th><th>ಜಿಲ್ಲೆ</th><th>ಕಾರ್ಯ ನಿರ್ವಹಿಸುತ್ತಿರುವ ಪಶುವೈದ್ಯ ಸಂಸ್ಥೆಗಳ ಸಂಖ್ಯೆ</th></tr><tr><td>1.</td><td>ಧಾರವಾಡ</td><td>112</td></tr><tr><td>2.</td><td>ಗದಗ</td><td>87</td></tr><tr><td>3</td><td>ಹಾವೇರಿ</td><td>146</td></tr></table></td></tr>
<tr><td>ಆ)</td><td>ಎಷ್ಟು ಪಶುಚಿಕಿತ್ಸಾಲಯಗಳು ಸ್ವಂತ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿವೆ.</td><td>ಧಾರವಾಡ, ಗದಗ, ಹಾವೇರಿ ಜಿಲ್ಲೆಗಳಲ್ಲಿ ಸ್ವಂತ ಕಟ್ಟಡದಲ್ಲಿ ಕಾರ್ಯ ನಿರ್ವಹಿಸುತ್ತಿರುವ ವಿವಿಧ ಪಶುವೈದ್ಯ ಸಂಸ್ಥೆಗಳ ಸಂಖ್ಯೆಯ ವಿವರವನ್ನು ಈ ಕೆಳಕಂಡಂತೆ ನೀಡಲಾಗಿದೆ.
<table><tr><th>ಕ್ರ.ಸಂ</th><th>ಜಿಲ್ಲೆ</th><th>ಸ್ವಂತ ಕಟ್ಟಡದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಪಶುವೈದ್ಯ ಸಂಸ್ಥೆಗಳ ಸಂಖ್ಯೆ</th></tr><tr><td>1.</td><td>ಧಾರವಾಡ</td><td>92</td></tr><tr><td>2.</td><td>ಗದಗ</td><td>80</td></tr><tr><td>3</td><td>ಹಾವೇರಿ</td><td>136</td></tr></table></td></tr>
</table>

<table>
<tr><td>ಇ)</td><td>2018 ರಿಂದ 2020 ನೇ ಸಾಲಿನವರೆಗೆ ಪಶುಚಿಕಿತ್ಸಾಲಯಗಳ ಕಟ್ಟಡಗಳ ನಿರ್ಮಾಣಕ್ಕೆ ಮಾಡಲು ಬಿಡುಗಡೆಯಾದ ಅನುದಾನವೆಷ್ಟು;</td><td>2018 ರಿಂದ 2020 ನೇ ಸಾಲಿನವರೆಗೆ, ಧಾರವಾಡ, ಗದಗ, ಹಾವೇರಿ ಜಿಲ್ಲೆಗಳಲ್ಲಿನ ವಿವಿಧ ಪಶುವೈದ್ಯಕೀಯ ಸಂಸ್ಥೆಗಳ ಕಟ್ಟಡಗಳ ನಿರ್ಮಾಣ ಮಾಡಲು ಬಿಡುಗಡೆಯಾದ ಅನುದಾನ ಈ ಕೆಳಕಂಡಂತಿದೆ.
<table>
<tr><th>ಕ್ರ.ಸಂ</th><th>ಜಿಲ್ಲೆ</th><th>2018 ರಿಂದ 2020 ನೇ ಸಾಲಿನವರೆಗೆ, ಪಶುಚಿಕಿತ್ಸಾಲಯಗಳ ಕಟ್ಟಡಗಳ ನಿರ್ಮಾಣ ಮಾಡಲು ಬಿಡುಗಡೆಯಾದ ಅನುದಾನ (ರೂ. ಲಕ್ಷಗಳಲ್ಲಿ)</th></tr>
<tr><td>1.</td><td>ಧಾರವಾಡ</td><td>854.97</td></tr>
<tr><td>2.</td><td>ಗದಗ</td><td>150.44</td></tr>
<tr><td>3</td><td>ಹಾವೇರಿ</td><td>529.10</td></tr>
</table></td></tr>
<tr><td>ಈ)</td><td>ಈ ಮೇಲಿನ ಎಲ್ಲಾ ಪಶು ಚಿಕಿತ್ಸಾಲಯಗಳಿಗೆ ವೈದ್ಯಾಧಿಕಾರಿಗಳನ್ನು ನಿಯೋಜಿಸಲಾಗಿದೆಯೇ;</td><td>ನೇರ ನೇಮಕಾತಿ, ವರ್ಗಾವಣೆ ಮತ್ತು ಮುಂಬಡ್ತಿ ಮುಖಾಂತರ ಪಶು ಚಿಕಿತ್ಸಾಲಯಗಳಿಗೆ ವೈದ್ಯಾಧಿಕಾರಿಗಳನ್ನು ಸ್ಥಳ ನಿಯುಕ್ತಿಗೊಳಿಸಲಾಗಿದೆ ಹಾಗೂ ಕೆಲವು ಕಡೆ ಖಾಲಿಯಿರುವ ಹುದ್ದೆಗಳಿಗೆ ಸಮೀಪದ ಪಶುವೈದ್ಯ ಸಂಸ್ಥೆಗಳಿಂದ ಅಧಿಕ ಪ್ರಭಾರದ ಮೂಲಕ ಪಶುವೈದ್ಯಾಧಿಕಾರಿಗಳನ್ನು ನಿಯೋಜಿಸಿ ಜಾನುವಾರುಗಳಿಗೆ ತೊಂದರೆಯಾಗದಂತೆ ಸೂಕ್ತ ಚಿಕಿತ್ಸೆ ನೀಡಲು ಕ್ರಮ ವಹಿಸಲಾಗಿದೆ.</td></tr>
<tr><td>ಉ)</td><td>ಈ ಮೇಲಿನ ಜಿಲ್ಲೆಯಲ್ಲಿ ಖಾಲಿ ಇರುವ ಪಶುವೈದ್ಯಾಧಿಕಾರಿಗಳ ಹುದ್ದೆ ಭರ್ತಿ ಮಾಡಲು ಕೈಗೊಂಡಿರುವ ಕ್ರಮಗಳೇನು?</td><td>ಈ ಮೇಲಿನ ಮೂರು ಜಿಲ್ಲೆಗಳು ಸೇರಿದಂತೆ ರಾಜ್ಯದಲ್ಲಿ ಖಾಲಿಯಿರುವ ಪಶುವೈದ್ಯಾಧಿಕಾರಿಗಳ ಹುದ್ದೆಗಳಲ್ಲಿ 639 ಪಶುವೈದ್ಯಾಧಿಕಾರಿ ಹುದ್ದೆಗಳನ್ನು ವಿಶೇಷ ನೇಮಕಾತಿ ನಿಯಮಗಳ ಮುಖಾಂತರ ಭರ್ತಿ ಮಾಡುವ ಪ್ರಸ್ತಾವನೆಗೆ ಪ್ರಸ್ತುತ ಆರ್ಥಿಕ ನಿರ್ಬಂಧಗಳ ಹಿನ್ನಲೆಯಲ್ಲಿ ಆರ್ಥಿಕ ಇಲಾಖೆಯು ಸಹಮತಿ ನೀಡಿರುವುದಿಲ್ಲ, ಆದುದರಿಂದ ಆರ್ಥಿಕ ಇಲಾಖೆಯ ಮುಂದಿನ ಆದೇಶದವರೆಗೂ ಸದರಿ ನೇಮಕಾತಿ ಪ್ರಕ್ರಿಯೆಯನ್ನು ತಾತ್ಕಾಲಿಕವಾಗಿ ಮುಂದೂಡಲಾಗಿರುತ್ತದೆ.</td></tr>
</table>

ಸಂ: ಪಸಂಮೀ ಇ-18 ಪಸಸೇ 2021

(ಪ್ರಭು.ಬಿ.ಚವ್ಹಾಣ್)
ಪಶುಸಂಗೋಪನೆ ಸಚಿವರು